**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 38/2018**

**ಚಾ.ಸಾ. :- 09**
**ಪ್ರಾ.ಸಾ. :- 11**

ಹೆಸರು : ರವಿಕುಮಾರ್

ತಂದೆಯ ಹೆಸರು : ಲೇಟ್ ಬೆಟ್ಟಯ್ಯ

ವಯಸ್ಸು : 45 ವರ್ಷ

ಉದ್ಯೋಗ : Painter

ವಾಸಸ್ಥಳ : ಕಳಸ್ತವಾಡಿ ಗ್ರಾಮ.

---

**ಪ್ರಮಾಣೀಕರಿಸಲಾದ ದಿನಾಂಕಃ- 01.12.2025.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಡಿ) ಎಂದು ಗುರುತಿಸಲಾಯಿತು. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದಲ್ಲಿ ಮಾಡಿರುತ್ತೇನೆ. ಸದರಿ ದಾಖಲೆಗೆ ಸಹಿ ಮಾಡುವಾಗ ನನ್ನ ಸಮಕ್ಷಮ ಪೊಲೀಸರು ಅಪಘಾತಕ್ಕೆ ಸಂಬಂಧಿಸಿದಂತೆ ದ್ವಿಚಕ್ರ ವಾಹನವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ. ಚಾ.ಸಾ-2 ರವರು ಪೊಲೀಸರಿಗೆ ಸ್ಥಳ ತೋರಿಸಿರುತ್ತಾರೆ. ಚಾ.ಸಾ-8 ರವರು ಸಹ ಆ ಸಮಯದಲ್ಲಿ ಹಾಜರಿದ್ದರು.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>**

ಪೊಲೀಸರು ನೋಟೀಸ್ ಕೊಟ್ಟಿರುತ್ತಾರೆ. ನಿಪಿ-3 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸಾಕ್ಷಿ ಓದಿರುತ್ತೇನೆ ಎನ್ನುತ್ತಾರೆ. ಮೃತರು ನಮ್ಮ ಊರಿನವರು. ದ್ವಿಚಕ್ರ ವಾಹನದ ನೋಂದಣಿ ಸಂಖ್ಯೆ KA-09-NH-8003 ಆಗಿರುತ್ತದೆ. ಮಹಜರಿನಲ್ಲಿ ದ್ವಿಚಕ್ರ ವಾಹನದ ನೋಂದಣಿ ಸಂಖ್ಯೆ ನಮೂದು ಮಾಡಿರುತ್ತಾರೆ. ನಾನು ಸ್ಥಳ ಮಹಜರ್ ಸಮಯದಲ್ಲಿ ಹಾಜರಿರಲಿಲ್ಲ ಎಂದರೆ ಸರಿಯಲ್ಲ. ನಿಪಿ-3 ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ ಎಂದರೆ ಸರಿಯಲ್ಲ. ನಿಪಿ-3 ನ್ನು ಪೊಲೀಸ್ ಠಾಣೆಯಲ್ಲಿ ತಯಾರು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಮೃತರು ನಮ್ಮ ಊರಿನವರಾದ ಕಾರಣ ಪ್ರಕರಣಕ್ಕೆ ಅನುಕೂಲವಾಗುವಂತೆ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ :- ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**